# MAY 13, 2024

## ALL INDIA RADIO - DHARWAD

## PRADESH SAMACHARA (KANNADA) 7:05 AM

<><><>

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು:**

<><><>

- ಶ್ರೀ ಶಂಕರಾಚಾರ್ಯರು ಹಾಗೂ ಶ್ರೀ ರಾಮಾನುಜಾಚಾರ್ಯರ ಜಯಂತ್ಯುತ್ಸವ: ರಾಜ್ಯದೆಲ್ಲೆಡೆ, ಅರ್ಥಪೂರ್ಣ ಆಚರಣೆ.
- ಆಯುಷ್ಮಾನ್ ಭಾರತ: ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಿಂದ, ಅತೀ ಹೆಚ್ಚು ಆರೋಗ್ಯಾಕಾಂಕ್ಷಿಗಳ ದಾಖಲೆ ಜೋಡಣೆ.
- ಅರಣ್ಯ ಸಂರಕ್ಷಣೆಯಲ್ಲಿ, ಭಾರತ ಗಮನಾರ್ಹ ಪ್ರಗತಿ – ವಿಶ್ವ ಸಂಸ್ಥೆಗೆ, ವರದಿ ಸಲ್ಲಿಕೆ.
- ವಿಧಾನ ಪರಿಷತ್ತಿನ ಆರು ಸ್ಥಾನಗಳಿಗೆ, ಜೂನ್ 3 ರಂದು ಚುನಾವಣೆ; ಗರಿಗೆದರಿದ ರಾಜಕೀಯ ಚಟುವಟಿಕೆ.

<><><>

**ಈಗ ವಾರ್ತೆಗಳ ವಿವರ**

<><><>

ಆತ್ಮ ಮತ್ತು ಪರಮಾತ್ಮ ಎರಡೂ ಒಂದೇ ಎಂಬ, ಅದ್ವೈತ ಸಿದ್ಧಾಂತದ ಪ್ರತಿಪಾದಕರಾದ, ಆದಿ ಶಂಕರಾಚಾರ್ಯರು ಮತ್ತು ಶರೀರಾತ್ಮ ಭಾವ ಪ್ರತಿಪಾದಿಸಿದ, ವಿಶಿಷ್ಠಾದ್ವೈತ ಸಿದ್ಧಾಂತದ ಪ್ರತಿಪಾದಕರಾದ ಶ್ರೀ ರಾಮಾನುಜಾಚಾರ್ಯರ ಜಯಂತಿಯನ್ನು, ರಾಜ್ಯದೆಲ್ಲೆಡೆ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

<><><>

ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ, ಶಂಕರಾಚಾರ್ಯ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಜಿಲ್ಲಾಡಳಿಗಳು ಪೂಜ್ಯ ಶಂಕರಾಚಾರ್ಯರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಪುಷ್ಪ ನಮನ ಸಲ್ಲಿಸಿದವು.

<><><>

ಶಂಕರಾಚಾರ್ಯರು ಸ್ಥಾಪಿಸಿದ, ಚಿಕ್ಕಮಗಳೂರು ಜಿಲ್ಲೆಯ, ಪ್ರಸಿದ್ಧ ಶೃಂಗೇರಿ ಶಾರದಾ ಪೀಠದಲ್ಲಿ, ವಿವಿಧ ಧಾರ್ಮಿಕ ವಿಧಿ ವಿಧಾನಗಳು ನೆರವೇರಿದವು.

ಶ್ರೀ ಮಠದ ಉಭಯ ಜಗದ್ಗುರುಗಳು ವಿಶೇಷ ಪೂಜೆ, ಗುರು ವಂದನಾ ಕಾರ್ಯಕ್ರಮಗಳನ್ನು ಮಠದಲ್ಲಿ ನಡೆಸಿಕೊಟ್ಟರು.

ಶೃಂಗೇರಿಯ ಮಾರುತಿ ಬೆಟ್ಟದಲ್ಲಿರುವ 32 ಅಡಿ ಎತ್ತರದ ಶಂಕರಾಚಾರ್ಯರ ವಿಗ್ರಹಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು.

<><><>

ಗದಗ ನಗರದ ಐತಿಹಾಸಿಕ ತ್ರೀಕೂಟೇಶ್ವರ ದೇವಸ್ಥಾನದಲ್ಲಿ, ಆದಿಗುರು ಶ್ರೀ ಶಂಕರಾಚಾರ್ಯರ ಜಯಂತ್ಯುತ್ಸವ ಕಾರ್ಯಕ್ರಮ ಜರುಗಿತು.

ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಶ್ರೀ ಶಂಕರಾಚಾರ್ಯರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶ್ರೀ ಶಂಕರಾಚಾರ್ಯರ ಜಯಂತಿ ಆಚರಿಸಲಾಯಿತು.

ಚಿತ್ರದುರ್ಗ ಜಿಲ್ಲಾ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಮಾತನಾಡಿ, ಪೂಜ್ಯ ಶಂಕರಾಚಾರ್ಯರು, ಅಹಂ ಬ್ರಹ್ಮಾಸ್ಮಿ ಎಂಬ ತತ್ವದ ಮೂಲಕ ನಮ್ಮಲ್ಲೇ ನಾವು ದೈವತ್ವನ್ನು ಕಾಣಬೇಕು ಎಂದು ಪ್ರತಿಪಾದಿಸಿದರು, ಎಂದರು.

ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಜಗದ್ಗುರು ಶ್ರೀ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ರಾಯಚೂರು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ, ಶಂಕರಾಚಾರ್ಯ ಜಯಂತಿಯನ್ನು, ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸನಾತನ ಹಿಂದೂ ಧರ್ಮದ ಉಳಿವು ಮತ್ತು ಬೆಳವಣಿಗೆಯಲ್ಲಿ, ಶಂಕರಾಚಾರ್ಯರು ನೀಡಿದ ಕೊಡುಗೆ ಅಪಾರ ಎಂದು, ಯಾದಗಿರಿ ಜಿಲ್ಲಾಧಿಕಾರಿ ಡಾಕ್ಟರ್ ಬಿ.ಸುಶೀಲಾ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಆಚರಿಸಲಾಯಿತು.

ಜಗದ್ಗುರು ಶಂಕರಾಚಾರ್ಯರ ಜಯಂತಿ ಮಹೋತ್ಸವವನ್ನು, ಮೈಸೂರಿನಲ್ಲಿ ಸರಳವಾಗಿ ಆಚರಿಸಲಾಯಿತು.

<><><>

ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆ, ಆಯುಷ್ಮಾನ್ ಭಾರತ ಆರೋಗ್ಯ ಖಾತೆಗೆ, ಅತೀ ಹೆಚ್ಚು ಆರೋಗ್ಯಾಕಾಂಕ್ಷಿಗಳ ದಾಖಲೆಗಳನ್ನು ಜೋಡಿಸಿ, ಶ್ಲಾಘನೆಗೆ ಪಾತ್ರವಾಗಿದೆ. 'ಸ್ಕ್ಯಾನ್ ಅ್ಯಂಡ್ ಶೇರ್' ಮಾದರಿಯ, ಕ್ವಿಕ್ ರೆಸ್ಪಾನ್ಸ್ ಕೋಡ್ ಅಡಿ, ಶೀಘ್ರ ಗತಿ ಆರೋಗ್ಯಾಕಾಂಕ್ಷಿ ನೋಂದಣಿ ವ್ಯವಸ್ಥೆ ಮೂಲಕ, 65 ಸಾವಿರದ 623 ಆರೋಗ್ಯ ಸಂಬಂಧಿ ದಾಖಲೆಗಳನ್ನು, ಆಯುಷ್ಮಾನ್ ಭಾರತ ಆರೋಗ್ಯ ಖಾತೆಗೆ ಆಸ್ಪತ್ರೆ ಜೋಡಿಸಿದೆ. ಕಳೆದ ಫೆಬ್ರವರಿ 7 ರಿಂದ ಏಪ್ರಿಲ್ 6ರ ವರೆಗೆ, ಡಿಜಿಟಲ್

ಹೆಲ್ತ್ ಮ್ಯಾರಾಥಾನ್ ಆಂದೋಲನದಡಿ, 45 ಸಾವಿರದ 641 ನೋಂದಾಯಿತ ಟೋಕನ್‌ಗಳನ್ನು ವಿತರಿಸಿದೆ ಎಂದು, ರಾಜ್ಯ ಆರೋಗ್ಯ ಇಲಾಖೆ ಆಯುಕ್ತ ಡಿ.ರಂದೀಪ್ ತಿಳಿಸಿದ್ದಾರೆ. ಆರೋಗ್ಯ ಸೌಲಭ್ಯ ನೋಂದಣಿ ಅಡಿ, 49 ಸಾವಿರದ 269 ಪ್ರಮಾಣೀಕೃತ ಆರೋಗ್ಯ ಸೌಲಭ್ಯಗಳಿಗೆ, 46 ಸಾವಿರದ 673 ಆರೋಗ್ಯ ಆರೈಕೆ ವೃತ್ತಿಪರರನ್ನು ಜೋಡಿಸಿ, ಇಡೀ ದೇಶಕ್ಕೆ ಪ್ರಥಮ ಸ್ಥಾನದಲ್ಲಿದೆ ಎಂದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದೆ.

<><><>

ಕರ್ನಾಟಕ ವಿಧಾನ ಪರಿಷತ್‌ಗೆ ಬಿಜೆಪಿಯಲ್ಲಿ ಹಲವರು ಟಿಕೆಟ್ ಆಕಾಂಕ್ಷಿಗಳು ಇದ್ದರು. ಟಿಕೆಟ್ ಕೈ ತಪ್ಪಿದಾಗ ಸಹಜವಾಗಿಯೇ ಆಕಾಂಕ್ಷಿಗಳಿಗೆ ಬೇಸರವಾಗುತ್ತದೆ. ಸದ್ಯದಲ್ಲೇ ಎಲ್ಲವೂ ಸರಿ ಹೋಗಲಿದೆ ಎಂದು, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತ ಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಅವರು, ಈಗಾಗಲೇ ಬಿಜೆಪಿ–ಜೆಡಿಎಸ್ ಮೈತ್ರಿ ಕುರಿತು, ವರಿಷ್ಠರು ತೀರ್ಮಾನಿಸಿದ್ದಾರೆ. ಅದರಂತೆ ನಡೆಯಲಿದೆ ಎಂದರು.

<><><>

ರಾಜ್ಯ ವಿಧಾನ ಪರಿಷತ್ತಿನ ದಕ್ಷಿಣ ಶಿಕ್ಷಕರ ಮತಕ್ಷೇತ್ರದಿಂದ, ಕಾಂಗ್ರೆಸ್ ಅಭ್ಯರ್ಥಿಯಾಗಿ ಮರಿತಿಬ್ಬೇಗೌಡ ಅವರ ಹೆಸರನ್ನು, ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನುಮೋದಿಸಿದ್ದಾರೆ ಎಂದು, ಎ.ಐ.ಸಿ.ಸಿ. ಪ್ರಕಟಣೆ ತಿಳಿಸಿದೆ.

<><><>

ರಾಜ್ಯದ ವಿಧಾನ ಪರಿಷತ್ತಿನ ಆರು ಸ್ಥಾನಗಳಿಗೆ, ಜೂನ್ 3 ರಂದು ಚುನಾವಣೆ ನಡೆಯಲಿರುವ ಹಿನ್ನೆಲೆ, ಬೆಂಗಳೂರಿನಲ್ಲಿ ಕೆ.ಪಿ.ಸಿ.ಸಿ. ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಚುನಾವಣಾ ಪೂರ್ವ ಸಭೆ ನಡೆಯಿತು.

<><><>

ಕೊಪ್ಪಳ ತೋಟಗಾರಿಕೆ ಇಲಾಖೆ, ಇಂದಿನಿಂದ 21ನೇ ತಾರೀಖಿನ ವರೆಗೆ, ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು, ಕೊಪ್ಪಳ ನಗರದ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಿದೆ. ಮಾವು ಮೇಳಕ್ಕೆ ಜಿಲ್ಲಾಧಿಕಾರಿ ನಳಿನ ಅತುಲ್ ಇಂದು ಬೆಳಗ್ಗೆ 11 ಗಂಟೆಗೆ, ಚಾಲನೆ ನೀಡುವರು. ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ್ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಕೃಷ್ಣ ಉಕ್ಕುಂದ ಧ್ವನಿ 50 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಅರಣ್ಯ ಸಂರಕ್ಷಣೆ ಹಾಗೂ ನಿರ್ವಹಣೆಯಲ್ಲಿ, ಗಮನಾರ್ಹ ಪ್ರಗತಿ ಸಾಧಿಸಿದ್ದಾಗಿ ಭಾರತ, ವಿಶ್ವ ಸಂಸ್ಥೆಗೆ ತಿಳಿಸಿದೆ. ಇದೇ ತಿಂಗಳ 6ನೇ ತಾರೀಖಿನಿಂದ 10ರ ವರೆಗೆ, ಅಮೆರಿಕದ ನ್ಯೂಯಾರ್ಕ್‌ನಲ್ಲಿ ಜರುಗಿದ, ವಿಶ್ವ ಸಂಸ್ಥೆಯ ಅರಣ್ಯ ವೇದಿಕೆಯ 19ನೇ ಮಹಾ ಅಧಿವೇಶನದಲ್ಲಿ ಭಾರತ ಈ ವರದಿ ಸಲ್ಲಿಸಿದೆ. ಜಾಗತಿಕವಾಗಿ ಅರಣ್ಯ ಸಂರಕ್ಷಣೆಯಲ್ಲಿ ಭಾರತ ಮೂರನೇ ಸ್ಥಾನದಲ್ಲಿದೆ. ಕಳೆದ 15 ವರ್ಷಗಳಲ್ಲಿ ಅರಣ್ಯ ಸಂರಕ್ಷಣೆ ಹಾಗೂ ನಿರ್ವಹಣೆಯಲ್ಲಿ ಭಾರತ ದೊಡ್ಡ ಪ್ರಗತಿ ಸಾಧಿಸಿದೆ ಎಂದು ತಿಳಿಸಿದೆ. 'ಪ್ರೊಜೆಕ್ಟ ಟೈಗರ್ ಯೋಜನೆಗೆ 50 ವರ್ಷ' ಹಾಗೂ 'ಪ್ರೊಜೆಕ್ಟ ಎಲಿಫೆಂಟ್' ಯೋಜನೆಗೆ 30 ವರ್ಷ'

ಗಳಾಗಿದ್ದು, ಈ ಎರಡೂ ಮಹತ್ವದ ಯೋಜನೆಗಳು ಭಾರತದಲ್ಲಿ ಅರಣ್ಯ, ವನ್ಯಜೀವಿ ಸಂರಕ್ಷಣೆಯ ನಿಟ್ಟಿನಲ್ಲಿ ಭಾರಿ ಯಶಸ್ಸು ಕಂಡಿವೆ ಎಂದು ಹೇಳಿದೆ.

<><><>

ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದಲ್ಲಿ, 'ಪಾರಂಪರಿಕ ಬೀಜೋತ್ಸವ'ಕ್ಕೆ, ಮೈಸೂರಿನ ದೇಸಿ ಬೀಜ ಸಂರಕ್ಷಕಿ, ಬೀಜ ಮಾತೆ ಪದ್ಮಾವತಮ್ಮ ಚಾಲನೆ ನೀಡಿದರು. ಸಾವಿರಕ್ಕೂ ಅಧಿಕ ದೇಸಿ ಬೀಜ ತಳಿಗಳ ಪ್ರದರ್ಶನ ಗಮನ ಸೆಳೆಯಿತು. ಈ ಕುರಿತು, ಭಾರತೀಯ ಕೃಷಿ ಅನುಸಂಧಾನ ಪರಿಷತ್ ಸಂಚಾಲಿತ, ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ, ಡಾಕ್ಟರ್ ಟಿ.ಎನ್. ದೇವರಾಜ್, ಪ್ರದೇಶ ಸಮಾಚಾರಕ್ಕಾಗಿ, ಬೀಜೋತ್ಸವದ ಮಾಹಿತಿ ನೀಡಿದ್ದಾರೆ.

<><><>

ಡಾಕ್ಟರ್ ಟಿ.ಎನ್. ದೇವರಾಜ್ ಧ್ವನಿ 50 ಸೆಕೆಂದುಗಳು

<><><>

ಬಸವ ಜಯಂತಿ ಹಾಗೂ ಬಸವ ಪೀಠದ ಸುವರ್ಣ ಮಹೋತ್ಸವ ಸಮಾರಂಭದ ಅಂಗವಾಗಿ, "ಬಸವಣ್ಣ: ಸಾಂಸ್ಕೃತಿಕ ನಾಯಕ", ವಿಷಯವಾಗಿ, ಅಂತಾರಾಷ್ಟ್ರೀಯ ವಿಚಾರ ಸಂಕಿರಣ, ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ, ಸುವರ್ಣ ಮಹೋತ್ಸವ ಭವನದಲ್ಲಿ, ಇಂದು ಬೆಳಗ್ಗೆ 10 ಗಂಟೆಗೆ, ಉದ್ಘಾಟನೆಗೊಳ್ಳಲಿದೆ. ಬುಧವಾರ ದಿನಾಂಕ 15 ರಂದು, ಬೆಳಗ್ಗೆ 9 ಗಂಟೆಗೆ, ಬಸವಣ್ಣನವರ ಭಾವಚಿತ್ರ ಹಾಗೂ ವಚನ ಸಂಪುಟಗಳ ಮೆರವಣಿಗೆ, ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ, ಆಡಳಿತ ಕಚೇರಿಯಿಂದ, ಸುವರ್ಣ ಮಹೋತ್ಸವ ಭವನದ ವರೆಗೆ ಜರುಗಲಿದೆ ಎಂದು, ಶ್ರೀ ಬಸವೇಶ್ವರ ಪೀಠದ ಸಂಯೋಜಕ ಡಾಕ್ಟರ್ ಸಿ.ಎಂ. ಕುಂದಗೋಳ ತಿಳಿಸಿದ್ದಾರೆ.

<><><>

ಕರ್ನಾಟಕ ಸೇರಿದಂತೆ 4 ರಾಜ್ಯಗಳಲ್ಲಿ, ಮುಂದಿನ ಎರಡು-ಮೂರು ದಿನ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಹುಬ್ಬಳ್ಳಿಯಲ್ಲಿ ನಿನ್ನೆ ಸಂಜೆ 7 ಸೆಂಟಿಮೀಟರ್ ಮಳೆಯಾಗಿದೆ. ಧಾರವಾಡ, ಗದಗ ಹಾಗೂ ಬೆಳಗಾವಿ ಸೇರಿದಂತೆ, ರಾಜ್ಯದ ಎಂಟು ಜಿಲ್ಲೆಗಳಲ್ಲಿ ಇಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. 40 ಕಿಲೋ ಮೀಟರ್ ವೇಗದಲ್ಲಿ ಬಿರು ಗಾಳಿ ಬೀಸುವ ಸಂಭವವಿದೆ. ಜಿಲ್ಲಾಡಳಿತಗಳು ಮುನ್ನೆಚ್ಚರಿಕೆ ವಹಿಸುವಂತೆ, ಹವಾಮಾನ ಇಲಾಖೆ ಸೂಚಿಸಿದೆ.

<><><>

ಮಂಡ್ಯದಲ್ಲಿ ಕಳೆದ ನಾಲ್ಕೈದು ದಿನಗಳಿಂದ ಸುರಿಯುತ್ತಿರುವ, ಭಾರೀ ಮಳೆಗೆ ವಿದ್ಯುತ್ ಕಂಬಗಳು, ಮರಗಳು ಉರುಳಿ ಬಿದ್ದು ಭಾರೀ ಹಾನಿಯಾಗಿದೆ. ಓರ್ವ ಯುವಕ ಸಹ ಮೃತಪಟ್ಟ ಘಟನೆ ವರದಿಯಾಗಿದೆ.

<><><>

ಬೆಳಗಾವಿ ನಗರ ಸೇರಿದಂತೆ, ಜಿಲ್ಲೆಯ ಬಹುತೇಕ ಕಡೆ ಭಾನುವಾರ ಸಂಜೆ 6 ಗಂಟೆಯಿಂದ ಸತತ ಮೂರು ಗಂಟೆಗಳ ಕಾಲ, ಗುಡುಗು ಸಹಿತ ಭಾರೀ ಮಳೆಯಾಗಿದೆ. ತಗ್ಗು ಪ್ರದೇಶಗಳು ಜಲಾವೃತ್ತಗೊಂಡು, ಕೆಲವೆಡೆ ವಾಹನ ಸಂಚಾರಕ್ಕೆ ಅಡ್ಡಿ ಉಂಟಾಗಿತ್ತು.

<><><>

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ, ಭಾನುವಾರ ಗುಡುಗು ಸಹಿತ ಮಳೆಯಾಗಿದೆ. ಎನ್.ಆರ್.ಪುರದ ಕಟ್ಟೆಮನೆ ಗ್ರಾಮದ ಬಳಿ, ಭಾರಿ ಗಾತ್ರದ ಮರ ಉರುಳಿ ಬಿದ್ದು, ಮಹಿಳೆಯೊಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಚಲಿಸುತ್ತಿದ್ದ ಕಾರಿನ ಮೇಲೆ ಈ ಮರ ಉರುಳಿದ್ದು, ಕಾರಿನಲ್ಲಿದ್ದ ಮೂವರು ಗಂಭೀರ ವಾಗಿ ಗಾಯಗೊಂಡಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು, ವಯೋಸಹಜ ಕಾಯಿಲೆಯಿಂದ, ಮಣಿಪಾಲ್ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರ ಆರೋಗ್ಯ ಸ್ಥಿರವಾಗಿದೆ.

<><><>

ಉತ್ತರಕನ್ನಡ ಜಿಲ್ಲೆ ಹಳಿಯಾಳ ಶಾಸಕ ಆರ್.ವಿ.ದೇಶಪಾಂಡೆ ಅವರು, ಆಸ್ಪತ್ರೆಗೆ ಭೇಟಿ ನೀಡಿ, ಕುಶಲ ವಿಚಾರಿಸಿದರು. ಆದ ಷ್ಟು ಬೇಗ ಕೃಷ್ಣ ಅವರು ಚೇತರಿಸಿಕೊಂಡು, ಗುಣಮುಖರಾಗಿ ಬರಲೆಂದು, ಭಗವಂತನಲ್ಲಿ ಪ್ರಾರ್ಥಿಸುವುದಾಗಿ, ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪ್ರಕಟಿಸಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ರಾಜ್ಯ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ, ಹಿರಿಯ ನಾಯಕ ಎಸ್.ಎಂ.ಕೃಷ್ಣ ಅವರ ಆರೋಗ್ಯ ವಿಚಾರಿಸಿದರು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಎರಡು ದಿನಗಳಿಂದ ಕೃಷ್ಣ ಅವರ ಆರೋಗ್ಯ ಕ್ಷೀಣಿಸಿದೆ. ಅವರು ಬೇಗ ಗುಣಮುಖರಾಗಲಿ ಎಂದು ಹಾರೈಸುವುದಾಗಿ, ತಿಳಿಸಿದರು.

<><><>

ಅಮನ್ ಸೆಹ್ರಾವತ್, 2024ರ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದ, ಮೊದಲ ಭಾರತೀಯ ಪುರುಷ ಕುಸ್ತಿ ಪಟು ಎಂಬ, ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಏಷ್ಯನ್ ಚಾಂಪಿಯನ್ ಸೆಹ್ರಾವತ್, ಟರ್ಕಿಯ ಇಸ್ತಾಂಬುಲ್‌ನಲ್ಲಿ ನಡೆದ, ವಿಶ್ವ ಕುಸ್ತಿ ಒಲಿಂಪಿಕ್ ಅರ್ಹತಾ ಪಂದ್ಯಗಳಲ್ಲಿ, ಪುರುಷರ 57 ಕಿಲೋ ಫ್ರೀ ಸ್ಟೈಲ್ ವಿಭಾಗದಲ್ಲಿ ಅರ್ಹತೆ ಪಡೆದು ಕೊಂಡರು.

<><><>

ಜಗತ್ತಿನಾದ್ಯಂತ, ತಾಯಂದಿರ ದಿನವನ್ನು, ಭಾನುವಾರ ಆಚರಿಸಲಾಯಿತು. ನಾಗಾಲ್ಯಾಂಡ್‌ನಲ್ಲಿ, ತಾಯಂದಿರ ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಗುತ್ತದೆ.

<><><>

2024ರ ಲೋಕಸಭೆ ಸಾರ್ವತ್ರಿಕ ಚುನಾವಣೆಯ, ನಾಲ್ಕನೇ ಹಂತದ ಮತದಾನಕ್ಕೆ ಇಂದು ವೇದಿಕೆ ಸಜ್ಜಾಗಿದೆ. ಒಂಬತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ 96 ಲೋಕಸಭಾ ಸ್ಥಾನಗಳಿಗೆ ಮತದಾನ ಆರಂಭವಾಗಿದೆ.

<><><>

ಸಂಗಂ ಸಾಹಿತ್ಯ ಪುರಸ್ಕಾರವನ್ನು, ಕಥೆಗಾರ್ತಿ ಅನುಪಮಾ ಪ್ರಸಾದ್ ಅವರ ಚೋದ್ಯ ಕಥಾ ಸಂಕಲನಕ್ಕೆ, ಬಳ್ಳಾರಿಯಲ್ಲಿ ನೀಡಿ ಗೌರವಿಸಲಾಯಿತು. ಪ್ರಶಸ್ತಿ 25 ಸಾವಿರ ರೂಪಾಯಿ ಹಾಗೂ ಫಲಕ ಒಳಗೊಂಡಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಶ್ರೀ ಶಂಕರಾಚಾರ್ಯರು ಹಾಗೂ ಶ್ರೀ ರಾಮಾನುಜಾಚಾರ್ಯರ ಜಯಂತ್ಯುತ್ಸವ; ರಾಜ್ಯದೆಲ್ಲೆಡೆ, ಅರ್ಥಪೂರ್ಣ ಆಚರಣೆ.
- ಆಯುಷ್ಮಾನ್ ಭಾರತ; ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಿಂದ, ಅತೀ ಹೆಚ್ಚು ಆರೋಗ್ಯಾಕಾಂಕ್ಷಿಗಳ ದಾಖಲೆ ಜೋಡಣೆ.
- ಅರಣ್ಯ ಸಂರಕ್ಷಣೆಯಲ್ಲಿ, ಭಾರತ ಗಮನಾರ್ಹ ಪ್ರಗತಿ – ವಿಶ್ವ ಸಂಸ್ಥೆಗೆ, ವರದಿ ಸಲ್ಲಿಕೆ.
- ವಿಧಾನ ಪರಿಷತ್ತಿನ ಆರು ಸ್ಥಾನಗಳಿಗೆ, ಜೂನ್ 3 ರಂದು ಚುನಾವಣೆ; ಗರಿಗೆದರಿದ ರಾಜಕೀಯ ಚಟುವಟಿಕೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ